**1 ನೇ ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಬ್ಬಳ್ಳಿ**

**MVC**-175/2025 **PW**: 1

**ದಿಃ**05.06.2026 **ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ ಎಂ.ಬಿ.ಆರ ವಕೀಲರಿಂದಃ**

ನಾನು ಈ ಅರ್ಜಿಯಲ್ಲಿ ಅರ್ಜಿದಾರನಾಗಿದ್ದು ನನ್ನ ಮುಖ್ಯವಿಚಾರಣೆಯ ಪ್ರಮಾಣ ಪತ್ರವನ್ನು ಈ ದಿನ ನ್ಯಾಯಾಲಯದ ಮುಂದೆ ಸಲ್ಲಿಸುತ್ತಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ. ಅದರಲ್ಲಿರುವ ಸಹಿ ನನ್ನದು.

ನಾನು ನನ್ನ ಅರ್ಜಿಗೆ ಸಂಬಂಧಿಸಿದಂತೆ ದೂರಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಸದರಿ ದಾಖಲೆಯನ್ನು ನಿಶಾನೆ ಪಿ 1 ಎಂದು, ಪ್ರಥಮ ವರ್ತಮಾನ ವರದಿಯ ದೃಢೀಕೃತ ನಕಲನ್ನು ನಿಶಾನೆ ಪಿ 2 ಎಂದು, ಸ್ಥಳ ಪಂಚನಾಮೆಯ ದೃಢೀಕೃತ ನಕಲನ್ನು ನಿಶಾನೆ ಪಿ 3 ಎಂದು, ಶವ ತನಿಖಾ ವರದಿಯ ದೃಢೀಕೃತ ನಕಲನ್ನು ನಿಶಾನೆ ಪಿ 4 ಎಂದು, ಐಎಂವಿ ವರದಿಯ ದೃಢೀಕೃತ ನಕಲನ್ನು ನಿಶಾನೆ ಪಿ 5 ಎಂದು, ಪಿ ಎಂ ವರದಿಯ ದೃಢೀಕೃತ ನಕಲನ್ನು ನಿಶಾನೆ ಪಿ 6 ಎಂದು, ದೂರುದಾರರ ಮುಂದುವರೆದ ಹೇಳಿಕೆಯ ದೃಢೀಕೃತ ನಕಲನ್ನು ನಿಶಾನೆ ಪಿ 7 ಎಂದು, ಅಂತಿಮ ವರದಿಯ ದೃಢೀಕೃತ ನಕಲನ್ನು ನಿಶಾನೆ ಪಿ 8 ಎಂದು, ಡಿಸಚಾರ್ಜ ಸಮರಿಯನ್ನು ಹಾಜರುಪಡಿಸಿದ್ದು ನಿಶಾನೆ ಪಿ 9 ಎಂದು, ಮಾದವ ನಾರಾಯಣ ಬಾಳಗಿ ಇವರ ಮರಣ ಪ್ರಮಾಣ ಪತ್ರದ ದೃಢೀಕೃತ ನಕಲನ್ನು ನಿಶಾನೆ ಪಿ 10 ಎಂದು, 246 ವೈದ್ಯಕೀಯ ಸಲಹಾ ಚೀಟಿಗಳನ್ನು ಒಟ್ಟಾಗಿ ನಿಶಾನೆ ಪಿ 11 ಎಂದು, 288 ವೈದ್ಯಕೀಯ ಬಿಲ್ ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಶಾನೆ ಪಿ 12 ಎಂದು, ನಾಲ್ಕು compatibility test report ಗಳನ್ನು ಒಟ್ಟಾಗಿ ನಿಶಾನೆ ಪಿ 13 ಎಂದು, ನೋಟರಿಯವರು ದೃಢೀಕರಿಸಿದ ನಾಲ್ಕು ಆಧಾರ ಕಾರ್ಡ ನಕಲುಗಳನ್ನು ಒಟ್ಟಾಗಿ ನಿಶಾನೆ ಪಿ 14 ಎಂದು, ವಂಶವೃಕ್ಷದ ದೃಢೀಕರಣ ಪತ್ರವನ್ನು ಹಾಜರುಪಡಿಸಿದ್ದು ನಿಶಾನೆ ಪಿ 15 ಎಂದು ಗುರ್ತಿಸಲಾಯಿತು.

(ಈ ಹಂತದಲ್ಲಿ ಎದುರುದಾರ ಪರ ವಕೀಲರು ಗೈರು ಹಾಜರಿರುವ ಕಾರಣ ಪಾಟೀ ಸವಾಲನ್ನು ಮುಂದುಡಲಾಯಿತು.)

(ನನ್ನ ಉಕ್ತಲೇಖದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೆ ಸರಿ ಇದೆ.

1 ನೇ ಅಧಿಕ ಹಿ.ದಿ.ನ್ಯಾ.ಹುಬ್ಬಳ್ಳಿ